# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯಪಾಲಕ ಅಭಿಯಂತರರು(ವಿ) ಕಛೇರಿ, ಮಹದೇವಪುರ ವಲಯ, ಬೆಂಗಳೂರು.

**ದಿನಾಂಕ:05-03-2022ರಂದು ನೋಡಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ಕೆ.ಆರ್.ಪುರ ಬಿಬಿಎಂಪಿ ಕಛೇರಿ, ವಿದ್ಯುತ್ ವಿಭಾಗ, ಕಛೇರಿಯಲ್ಲಿ ನಡೆದ ಸಭೆಯ ನಡವಳಿಗಳು:-**

ಸಭೆಗೆ ಹಾಜರಿದ್ದ ಅಧಿಕಾರಿಗಳು:

1. ಶ್ರೀ.ಶರತ್ ಕುಮಾರ್ – ನೋಡಲ್ ಅಧಿಕಾರಿಗಳು
2. ಶ್ರೀ.ಜಗದೀಶ್.ಎಂ. – ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು, ವಾರ್ಡ್-52
3. ಶ್ರೀ.ನಾಗರಾಜು– ಕಂದಾಯ ನಿರೀಕ್ಷಕರು, ವಾರ್ಡ್-52
4. ಶ್ರೀ.ನಿಜಮುದ್ದೀನ್-SI, Traffic
5. ಶ್ರೀ.ರಾಘವೇಂದ್ರ– ಹಿರಿಯ ಆರೋಗ್ಯ ನಿರೀಕ್ಷಕರು
6. ಶ್ರೀ.ಜಗದೀಶ್– JHI
7. ಶ್ರೀ.ಸುಕುಮಾರ್– ಅಸೋಸಿಯೇಷನ್ ಪರವಾಗಿ
8. ಶ್ರೀ.ದಿಲೀಪ್ – ಸಾರ್ವಜನಿಕರು

*********

ವಾರ್ಡ್ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು, ವಾರ್ಡ್ ಸಂ:52 ಸಭೆಗೆ ಎಲ್ಲಾರನ್ನು ಅಹ್ವಾನಿಸುತ್ತಾ, ಸಭೆಯ ವಿವರಗಳನ್ನು ನೀಡುವಂತೆ ಸೂಚಿಸಿದರು. ವಾರ್ಡ್ ಸಂ:52ಕ್ಕೆ ಸಂಬಂಧಿಸಿದಂತೆ ನಡೆಯುತ್ತಿರುವ ಅಭಿವೃದ್ಧಿ ಕಾರ್ಯಗಳು ಸಾರ್ವಜನಿಕರಿಂದ ಬಂದಂತಹ ಮನವಿಗಳು ವಾರ್ಡ್ ವ್ಯಾಪ್ತಿಯಲ್ಲಿ ಕೈಗೊಳ್ಳಬೇಕಾಗಿರುವ ಕೆಲಸ ಕಾರ್ಯಗಳು ಹಾಗೂ ಕಾಮಗಾರಿ ಇಲಾಖೆ ಇತರೆ ವಿಷಯಗಳ ಬಗ್ಗೆ ಈ ಕೆಳಕಂಡಂತೆ ಚರ್ಚಿಸಲಾಯಿತು.

- ಬಡಾವಣೆಗಳಲ್ಲಿ ಒಳಚರಂಡಿ ಸಮಸ್ಯೆಯನ್ನು ಸರಿಪಡಿಸಲು ಬಿ.ಡಬ್ಲ್ಯೂ.ಎಸ್.ಎಸ್.ಬಿ. ಅಭಿಯಂತರರಿಗೆ ಕ್ರಮ ವಹಿಸಲು ಸೂಚಿಸಲಾಯಿತು.
- ಕಸ ನಿರ್ವಹಣೆಯು ನಿರೀಕ್ಷಿತ ಮಟ್ಟದಲ್ಲಿರುವ ಬಗ್ಗೆ ಚರ್ಚಿಸಲಾಯಿತು. ಸಂಬಂಧಿಸಿದವರಿಗೆ ಕ್ರಮ ವಹಿಸಲು ಸೂಚಿಸಲಾಯಿತು.
- ಪಾದಚಾರಿ ಮಾರ್ಗಗಳ ಒತ್ತುವರಿ ತೆರವುಗೊಳಿಸಲು ಕೆ.ಆರ್.ಪುರ ಉಪ ವಿಭಾಗದ ಸಹಾಯಕ ಅಭಿಯಂತರರಿಗೆ ಕ್ರಮ ಕೈಗೊಳ್ಳಲು ತಿಳಿಸಲಾಯಿತು.
- ಬೀದಿ ನಾಯಿಗಳ ಹವಳಿ ನಿಯಂತ್ರಿಸಲು ಪಶು ಸಂಗೋಪನೆ ವೈದ್ಯಾಧಿಕಾರಿಗಳಿಗೆ ಸೂಕ್ತ ಕ್ರಮ ಕೈಗೊಳ್ಳಲು ತಿಳಿಸಲಾಯಿತು.
- ವಾರ್ಡ್‌ಗಳ ಬೀದಿ ದೀಪಗಳನ್ನು ಸರಿಪಡಿಸಿ ಸಮರ್ಪಕವಾಗಿ ಕಾರ್ಯನಿರ್ವಹಿಸಲು ತಿಳಿಸಲಾಯಿತು.
- ಟಿ.ಸಿ.ಪಾಳ್ಯ ಸಿಗ್ನಲ್‌ನಲ್ಲಿ ಡೀವೈಡರ್ ಅಳವಡಿಸುವಂತೆ ರಸ್ತೆ ಮೂಲಭೂತ ಸೌಕರ್ಯ, ಸಹಾಯಕ ಅಭಿಯಂತರರು ರವರಿಗೆ ಕ್ರಮ ವಹಿಸಲು ತಿಳಿಸಲಾಯಿತು.
- ಕೆ.ಆರ್.ಪುರ ಮಾರ್ಕೆಟ್ ಹತ್ತಿರ ಜನಸಂದಣಿ ನಿಯಂತ್ರಿಸಲು ಟ್ರಾಫಿಕ್ ರವರನ್ನು ಕೋರಲಾಯಿತು.

***ವಂದನೆಗಳೊಂದಿಗೆ ಈ ಎಲ್ಲಾ ವಿಷಯಗಳ ಬಗ್ಗೆ ಚರ್ಚಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.***

ವಾರ್ಡ್ ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು, ವಾರ್ಡ್ ಸಂ-52

ಪ್ರತಿಯನ್ನು:

1. ಮಾನ್ಯ ಜಂಟಿ ಆಯುಕ್ತರು, ಮಹದೇವಪುರ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
2. ಮಾನ್ಯ ಮುಖ್ಯ ಅಭಿಯಂತರರು, ಮಹದೇವಪುರ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
3. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆ.ಆರ್.ಪುರ ಉಪ ವಿಭಾಗ ರವರ ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ
4. ಸಹಾಯಕ ಕಾರ್ಯಪಾಲಕ ಅಭಿಯಂತರರು(ವಿದ್ಯುತ್) ರವರ ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ
5. ಸಹಾಯಕ ಕಂದಾಯ ಅಧಿಕಾರಿ ರವರ ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ಕೆ.ಆರ್.ಪುರ ಉಪ ವಿಭಾಗ ರವರ ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ
7. ಪಶುಸಂಗೋಪನೆ ವೈದ್ಯಾಧಿಕಾರಿ ರವರ ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ
8. ಕಛೇರಿ ಪ್ರತಿ